ಗೂಡಂಗಡಿಗಳಲ್ಲಿ ಮದ್ಯ ಮಾರಾಟ

1333(855); ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಹಿರೇಕೆರೂರು ತಾಲ್ಲೂಕಿನ ಗ್ರಾಮಗಳಲ್ಲಿ ಅನಧಿಕೃತವಾಗಿ ಗೂಡಂಗಡಿಗಳಲ್ಲಿ ಮದ್ಯ ಮಾರಾಟ ಮಾಡುತ್ತಿದ್ದರೂ ಕ್ರಮ ತೆಗೆದುಕೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ವಿಷಯದ ಬಗ್ಗೆ ಯಾವ ಯಾವ ಗ್ರಾಮಗಳಲ್ಲಿ ಪ್ರತಿಭಟನೆ ನಡೆದಿದೆ;

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು?

ಶ್ರೀ ಸತೀಶ ಲಕ್ಷ್ಮಣರಾವ್ ಜಾರಕಿಹೊಳಿ (ಅಬಕಾರಿ ಸಚಿವರು)

ಅ) ಹಿರೇಕೆರೂರು ತಾಲ್ಲೂಕಿನ ಕೆಲವೊಂದು ಗ್ರಾಮಗಳ ಗೂಡಂಗಡಿಗಳಲ್ಲಿ ಅನಧಿಕೃತ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ನಿಯಮಾನುಸಾರ ಕ್ರಮ ತೆಗೆದುಕೊಳ್ಳಲಾಗಿದೆ.

ಆ) ಹಾವೇರಿ ಜಿಲ್ಲೆಯಲ್ಲಿ ಹಿರೇಕೆರೂರು ತಾಲ್ಲೂಕಿನ ಹಿರೇಮೊರಬ ಗ್ರಾಮದಲ್ಲಿ ಪ್ರತಿಭಟನೆ ನಡೆದಿರುತ್ತದೆ.

ಇ) ರಾಜ್ಯದ ಕಿರಾಣಿ ಅಂಗಡಿಗಳು, ರಸ್ತೆ ಬದಿಯ ಹೋಟೆಲ್‌ಗಳು (ಡಾಬಾ) ಮತ್ತು ಗೂಡಂಗಡಿಗಳಲ್ಲಿ ಚಿಲ್ಲರೆ ಮದ್ಯ ಸೇವಿಸುವುದು ಹಾಗೂ ಸೇವನೆಗೆ ಅವಕಾಶ ಮಾಡಿಕೊಡುತ್ತಿರುವವರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ 1965 ಕಲಂ 15(ಎ) ಅಡಿಯಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದೆ. ಈ ಸಂಬಂಧ ಹಿರೇಕೆರೂರು ತಾಲ್ಲೂನಿನಲ್ಲಿ ಈವರೆಗೆ 23 ಪ್ರಕರಣಗಳನ್ನು ದಾಖಲಿಸಲಾಗಿದೆ.

ಅನಧಿಕೃತ ಹೋಟೆಲ್, ಕಿರಾಣಿ ಅಂಗಡಿಗಳು ಮದ್ಯ ಮಾರಾಟ ಮಾಡುತ್ತಿರುವಂತಹ ಮದ್ಯವು ಸರ್ಕಾರವು ಪಾವತಿಸಬೇಕಾದ ಸುಂಕ ಹಾಗೂ ಹೆಚ್ಚುವರಿ ಸುಂಕಗಳನ್ನು ಮುಂಗಡವಾಗಿ ಪಾವತಿಸಿದ ನಂತರ ರಾಜ್ಯದ ಏಕೈಕ ಸರ್ಕಾರಿ ಸ್ವಾಮ್ಯದ ಮದ್ಯ ವಿತರಣಾ ಘಟಕವಾದ ಕರ್ನಾಟಕ ರಾಜ್ಯ ಪಾನೀಯ ನಿಗಮ ನಿಗಧಿತ ಡಿಪೋಗಳಿಂದ ಸರಬರಾಜಾಗುತ್ತದೆ.

ಅನಧಿಕೃತ ಸ್ಥಳದಲ್ಲಿ ಚಿಲ್ಲರೆ ಮದ್ಯ ಸೇವಿಸುವುದು ಹಾಗೂ ಸೇವನೆಗೆ ಅವಕಾಶ ಮಾಡಿಕೊಡುತ್ತಿರುವ ಬಗ್ಗೆ ಮೊಕದ್ದಮೆಗಳನ್ನು ದಾಖಲು ಮಾಡಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ. ಹಾಗೂ ಪ್ರಕರಣಗಳನ್ನು ತಡೆಗಟ್ಟಲು ಜನಜಾಗೃತಿ ಮೂಡಿಸಲು ಗ್ರಾಮಸಭೆ/ ವಾರ್ಡ್‌ಸಭೆಗಳನ್ನು ನಡೆಸುತ್ತಿದ್ದು, ಕರ್ನಾಟಕ ಅಬಕಾರಿ ಕಾಯ್ದೆಯ ಕಲಂ 50 ರಂತೆ ಅಬಕಾರಿ ಅಕ್ರಮಗಳನ್ನು ತಡೆಗಟ್ಟುವಲ್ಲಿ ಸಾರ್ವಜನಿಕರ ಜವಾಬ್ದಾರಿ / ಹೊಣೆಗಾರಿಕೆ ಬಗ್ಗೆ ಅರಿವು ಮೂಡುವಂತೆ ತಿಳುವಳಿಕೆ ಪತ್ರಗಳನ್ನು ಸಂಬಂಧಿಸಿದ ಎಲ್ಲರಿಗೂ ಜಾರಿ ಮಾಡಲಾಗುತ್ತಿದೆ.

ಈ ಕುರಿತು ಪೊಲೀಸ್ ಇಲಾಖೆಯಲ್ಲಿ ಸ್ಥಾಪಿತವಾಗಿರುವ ಅಬಕಾರಿ ಜಾರಿ ಮತ್ತು ಲಾಟರಿ ನಿಷೇಧ ದಳ ಎಂಬ ವಿಶೇಷ ಘಟಕವೂ ಸಹ ನಿರಂತರ ಕಾರ್ಯಾಚರಣೆ ನಡೆಸುತ್ತಿದ್ದು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ 2 ತಿಂಗಳಿಗೊಮ್ಮೆ ನಡೆಯುತ್ತಿರುವ ಸಮನ್ವಯ ಸಮಿತಿ ಸಭೆಯಲ್ಲೂ ಅಬಕಾರಿ ಅಕ್ರಮ ಕುರಿತು ಅಗತ್ಯ ನಿರ್ದೇಶನಗಳನ್ನು ನೀಡಲಾಗುತ್ತಿದೆ. ಅಬಕಾರಿ ಇಲಾಖೆಯ ಸಿಬ್ಬಂದಿಯು ಸದಾ ಕಾಲ ಜಾಗೃತರಾಗಿದ್ದು, ನಿರಂತರ ದಾಳಿ ಕಾರ್ಯ ನಡೆಸಿ, ಯಾವುದೇ ಅಕ್ರಮ ಮದ್ಯ ಮಾರಾಟವಾಗದಂತೆ ಎಚ್ಚರಿಕೆ ವಹಿಸುವಂತೆ ನಿರ್ದೇಶಿಸಲಾಗಿದೆ.